**ಕರ್ನಾಟಕ ಸರ್ಕಾರ**

**ಶಾಲಾ ಶಿಕ್ಷಣ ಇಲಾಖೆ ಅಪರ ಆಯುಕ್ತರ ಕಛೇರಿ ಐವಾನ್-ಎ-ಶಾಹಿ ಬಡಾವಣೆ ಕಲಬುರಗಿ**

ಸಂಖ್ಯೆ: ಸಿ1(1)/ಆಡಳಿತ/ದ್ವಿದಸ/ಜೇಪಟ್ಟಿ/36/2023-24 ದಿನಾಂಕ: ~~20/01/~~2024 02/02

**ಜ್ಞಾಪನ**

ವಿಷಯ:- ಎದ್ದು ಕಾಣುವ ಅಂಗವೈಕಲ್ಯವನ್ನುಳ್ಳ ಸರ್ಕಾರಿ ನೌಕರರಿಗೆ ಗ್ರೂಪ್-ಡಿ ಮತ್ತು ಗ್ರೂಪ್-ಸಿ ವೃಂದಗಳಿಗೆ ನೀಡುವ ಮುಂಬಡ್ತಿಯಲ್ಲಿ ಮೀಸಲಾತಿಯನ್ನು ಕಲ್ಪಿಸುವ ಕುರಿತು.

ಉಲ್ಲೇಖ:-1) ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 121 ಸೇನೆನಿ 2020 ದಿನಾಂಕ: 28/03/2023.
2) ಸರ್ಕಾರದ ಅಧಿಸೂಚನೆ ಸಂಖ್ಯೆ: WCD 111 PHP 2022 ದಿನಾಂಕ: 15/11/2023.
3) ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 266 ಸೇನೆನಿ 2020 ದಿನಾಂಕ: 28/11/2023.

>><><><><<

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ (1)ರ ಸರ್ಕಾರದ ಆದೇಶದನ್ವಯ ರಾಜ್ಯ ಸಿವಿಲ್ ಸೇವೆಗಳಲ್ಲಿನ ಗ್ರೂಪ್-ಡಿ ಮತ್ತು ಗ್ರೂಪ್-ಸಿ ವೃಂದಗಳಿಗೆ ಸೇರಿದ ಹುದ್ದೆಗಳಿಗೆ ನೀಡುವ ಮುಂಬಡ್ತಿಯಲ್ಲಿ ಎದ್ದುಕಾಣುವ ಅಂಗವೈಕಲ್ಯವನ್ನುಳ್ಳ ಸರ್ಕಾರಿ ನೌಕರರಿಗೆ ಶೇಕಡ 4 ರಷ್ಟು ಮೀಸಲಾತಿ ಆಸ್ಪದವನ್ನು ಕೆಲವು ಷರತ್ತಿಗೊಳಪಟ್ಟು ಕಲ್ಪಿಸಲಾಗಿದೆ.

ಮುಂದುವರೆದು, ಉಲ್ಲೇಖ (1)ರ ಆದೇಶದಲ್ಲಿನ ಕಂಡಿಕೆ – 05 (07) ರಂತೆ 'ಮುಂಬಡ್ತಿ ಮೀಸಲಾತಿಯ ಸೌಲಭ್ಯವನ್ನು ಪಡೆಯಲು ಕೋರಲು ಇಚ್ಚಿಸಿದ, ಎದ್ದುಕಾಣುವ ಅಂಗವೈಕಲ್ಯವನ್ನುಳ್ಳ ಸರ್ಕಾರಿ ನೌಕರನು ಕರ್ನಾಟಕ ರಾಜ್ಯ ಅಂಗವೈಕಲ್ಯವನುಳ್ಳ ವ್ಯಕ್ತಿಗಳ ಹಕ್ಕುಗಳು ನಿಯಮಗಳು 2019ರ ನಿಯಮ 14ರಡಿ ಅದರಲ್ಲಿ ಉಲ್ಲೇಖಿಸಲಾದ ಪ್ರಮಾಣೀಕರಿಸುವ ಪ್ರಾಧಿಕಾರಕ್ಕೆ (certifying authority) ಅರ್ಜಿಯನ್ನು ಸಲ್ಲಿಸಿ ಅವನು ಅಂಗವೈಕಲ್ಯವನ್ನುಳ್ಳ ಬಗ್ಗೆ ಪ್ರಮಾಣ ಪತ್ರವನ್ನು ಪಡೆಯತಕ್ಕದ್ದು ಹಾಗೂ ಅದನ್ನು ನೇಮಕಾತಿ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು' ಎಂದು ತಿಳಿಸಲಾಗಿರುತ್ತದೆ.

ಅದರಂತೆ, ಶಾಲಾ ಶಿಕ್ಷಣ ಇಲಾಖೆಯ ಕಲಬುರಗಿ ಆಯುಕ್ತಾಲಯದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರೂಪ್-ಸಿ ಮತ್ತು ಗ್ರೂಪ್-ಡಿ ವೃಂದದ (ಪ್ರಥಮ ದರ್ಜೆ ಸಹಾಯಕರು/ ಶೀಘ್ರಲಿಪಿಗಾರರು / ದ್ವಿತೀಯ ದರ್ಜೆ ಸಹಾಯಕರು / ದ್ವಿತೀಯ ದರ್ಜೆ ಸಹಾಯಕರ ಸಹಿತ ಬೆರಳಚ್ಚುಗಾರರು) ಸಿಬ್ಬಂದಿಗಳಿಗೆ ಸಂಬಂಧಿಸಿದಂತೆ, ವೈದ್ಯಕೀಯ ಮಂಡಳಿಯ ತ್ರಿ-ಸದಸ್ಯ ಸಮಿತಿಯು ನೀಡಿರುವ ಭಾವಚಿತ್ರ ಸಹಿತ ದೃಢೀಕೃತ ಪ್ರಮಾಣ ಪತ್ರಗಳನ್ನು ಈ ಕೆಳಕಂಡ ಸೇವಾ ಮಾಹಿತಿಯೊಂದಿಗೆ ತಮ್ಮ ಜಿಲ್ಲಾ ವ್ಯಾಪ್ತಿಯಲ್ಲಿನ ಮಾಹಿತಿಯನ್ನು (ವೃಂದವಾರು ಪ್ರತ್ಯೇಕವಾಗಿ) ದೃಢೀಕರಣದೊಂದಿಗೆ ಕ್ರೋಢೀಕರಿಸಿ ಹದಿನೈದು ದಿನಗಳಲ್ಲಿ ಈ ಕಛೇರಿಗೆ ಸಲ್ಲಿಸಲು ತಿಳಿಸಿದೆ.

| ಕ್ರ.ಸಂ | ಜೇಷ್ಠತಾ ಸಂಖ್ಯೆ | ಕೆಜಿಐಡಿ ಸಂಖ್ಯೆ | ಸಿಬ್ಬಂದಿ ಹೆಸರು/ ಪದನಾಮ ಮತ್ತು ಕಛೇರಿ ವಿಳಾಸ | ಪ್ರಮಾಣ ಪತ್ರದ ವಿತರಿಸಿರುವ ಪ್ರಾಧಿಕಾರ ವಿವರ | ಪ್ರಮಾಣ ಪತ್ರ ಸಂಖ್ಯೆ | ಷರಾ/- |
|---|---|---|---|---|---|---|
| 1 | 2 | 3 | 4 | 5 | 6 | 7 |
| | | | | | | |

2.2.24

**(ಡಾ; ಆಕಾಶ್. ಎಸ್, ಭಾ.ಆ.ಸೇ)**
**ಅಪರ ಆಯುಕ್ತರು**
ಶಾಲಾ ಶಿಕ್ಷಣ ಇಲಾಖೆ ಕಲಬುರಗಿ

ಇವರಿಗೆ,

1) ಕಲಬುರಗಿ ಆಯುಕ್ತಾಲಯದ ವ್ಯಾಪ್ತಿಯಲ್ಲಿನ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು (ಆಡಳಿತ) ಇವರಿಗೆ ಸೂಕ್ತ ಕ್ರಮಕ್ಕಾಗಿ.
2) ನೋಡಲ್ ಅಧಿಕಾರಿಗಳು, ಇ-ಆಡಳಿತ ಶಾಖೆ, ಆಯುಕ್ತರ ಕಛೇರಿ, ಕಲಬುರಗಿ ರವರಿಗೆ ಸೂಕ್ತ ಕ್ರಮಕ್ಕಾಗಿ.
3) ಕಛೇರಿ ಪ್ರತಿ.